ರಾಯಭಾಗ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆ

191 (873) ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ). :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಯಭಾಗ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ಕೊರತೆ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು (ಹುದ್ದೆವಾರು ವಿವರ ಒದಗಿಸುವುದು);

ಆ) ಕೊರತೆ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

ಇ) ವೈದ್ಯರ ಕೊರತೆಯಿಂದ ರೋಗಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು (ವಿವರ ಒದಗಿಸುವುದು)?

ಶ್ರೀ ಅರವಿಂದ ಲಿಂಬಾವಾಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ) ರಾಯಭಾಗ ಸಾರ್ವಜನಿಕ ಆಸ್ಪತ್ರೆಯಲ್ಲಿ ಒಂದು ಮುಖ್ಯ ವೈದ್ಯಾಧಿಕಾರಿ, 1 ದಂತ ವೈದ್ಯಾಧಿಕಾರಿ ಹಾಗೂ 9 ತಜ್ಞ ವೈದ್ಯರ ಹುದ್ದೆಗಳು ಮಂಜೂರಾಗಿವೆ. ಆ ಪೈಕಿ 3 ಹುದ್ದೆಗಳು ಭರ್ತಿಯಾಗಿವೆ ಹಾಗೂ 8 ಹುದ್ದೆಗಳು ಖಾಲಿ ಇವೆ. ಮುಂದುವರೆದು, ಸದರಿ ಆಸ್ಪತ್ರೆಯಲ್ಲಿ 70 ವಿವಿಧ ವೃಂದಗಳ ಇತರೆ ಹುದ್ದೆಗಳು ಮಂಜೂರಾಗಿದ್ದು, 27 ಹುದ್ದೆಗಳು ಭರ್ತಿಯಾಗಿವೆ ಹಾಗೂ 43 ಹುದ್ದೆಗಳು ಖಾಲಿ ಇವೆ. ಖಾಲಿ ಇರುವ ಈ ಹುದ್ದೆಗಳ ಪೈಕಿ, 31 ಹುದ್ದೆಗಳು ಗ್ರೂಪ್–ಡಿ ವೃಂದಕ್ಕೆ ಸೇರಿವೆ. ಖಾಲಿ ಹುದ್ದೆಗಳ ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಆ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮದ ವಿವರಗಳನ್ನು ಅನುಬಂಧ–2ರಲ್ಲಿ ನೀಡಲಾಗಿದೆ.

ಇ) ಲಭ್ಯವಿರುವ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳಿಂದ ರೋಗಿಗಳಿಗೆ ತೊಂದರೆಯಾಗದಂತೆ ಆರೋಗ್ಯ ಸೇವೆ ಒದಗಿಸಲಾಗುತ್ತಿದೆ.

ಪ್ರಶ್ನೆ ಸಂಖ್ಯೆ 873 ಕ್ಕೆ ಅನುಬಂಧ – 1

ಸಿಬ್ಬಂದಿ ವಿವರ			
ಹುದ್ದೆಗಳ ಹೆಸರು	ಮಂಜೂರು	ಕಾರ್ಯನಿರತ	ಖಾಲಿ
ಮುಖ್ಯ ವೈದ್ಯಾಧಿಕಾರಿಗಳು	1	0	1
ಜನರಲ್ ಮೆಡಿಸನ್	1	1	0
ಇ.ಎನ್.ಟಿ	1	0	1
ಸ್ತ್ರೀರೋಗ ತಜ್ಞರು	1	0	1
ಜನರಲ್ ಸರ್ಜನ್	1	1	0
ಪಿಡಿಯಾಟ್ರೇಷನ್	1	0	1
ಅನೇಸ್ಥೇಸ್ಟಿಸ್	1	0	1
ಅಥೋ೯ಪಿಟಕ	1	0	1
ಚರ್ಮರೋಗ ತಜ್ಞರು	1	0	1
ನೇತ್ರ ತಜ್ಞರು	1	0	1
ದಂತ ವೈದ್ಯರು	1	1	0
ಲೇ ಸೆಕ್ರೆಟರಿ	1	0	1
ಕಚೇರಿ ಅಧೀಕ್ಷಕರು	1	0	1
ಪ್ರ.ದ.ಸಹಾಯಕ	1	0	1
ದ್ವಿ.ದ.ಸಹಾಯಕ	2	1	1
ಕ್ಲರ್ಕ ಕಂ ಟೈಪಿಸ್ಟ್	1	0	1
ಶುಶ್ರೂಷಾ ಅಧೀಕ್ಷಕರು –2	1	0	1
ಶುಶ್ರೂಷಕಿ	20	17	3
ಕಿ.ಪ್ರ.ತಂತ್ರಜ್ಞರು	1	1	0
ಹಿ.ಪ್ರ.ತಂತ್ರಜ್ಞರು	1	1	0
ಹಿ.ಫಾರ್ಮಸಿಸ್ಟ	1	0	1
ಕಿ.ಫಾರ್ಮಸಿಸ್ಟ	2	1	1
ಕ್ಷ ಕಿರಣ ತಂತ್ರಜ್ಞರು	2	2	0
ನೇತ್ರ ಸಹಾಯಕರು	1	1	0
ವಾಹನ ಚಾಲಕರು	2	2	0
ಗ್ರೂಪ್ ಡಿ	32	1	31
ಕುಕ್	1	0	1
ಒಟ್ಟು	81	30	51

ಅನುಬಂಧ–2

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರ, ವೈದ್ಯರ ಮತ್ತು ಇತರೇ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು.

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.)ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 70,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 50,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2. ಕೆ.ಹೆಚ್.ಎಸ್.ಡಿ.ಆರ್.ಪಿ. ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ರೂ. 65,000 ಹಾಗೂ ರೂ. 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗು ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ. 5,000 ದಿಂದ ರೂ. 10,000ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ. 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ. 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 125 ಹಾಗು ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 49 ವಿವಿಧ ತಜ್ಞತೆ ಹೊಂದಿರುವ

ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ/ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ. ತಜ್ಞ ವೈದ್ಯರ ವೃಂದದಲ್ಲಿ 2475 ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 1785 ಹುದ್ದೆಗಳು ಭರ್ತಿಯಾಗಿವೆ ಹಾಗೂ 690 ಹುದ್ದೆಗಳು ಖಾಲಿಯಿವೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 2390 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. (ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ವೈದ್ಯರು ಸೇರಿದಂತೆ) ಹಾಗೂ 196 ಹುದ್ದೆಗಳು ಖಾಲಿಯಿವೆ, ದಿನಾಂಕ : 27-06-2012 ರಂದು ಒಟ್ಟು 155 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ.

7. ಪ್ರಸ್ತುತ 735 ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಹಾಗೂ 314 ಕಿರಿಯ ಆರೋಗ್ಯ ಪುರುಷ ಸಹಾಯಕರ ಹುದ್ದೆಗಳನ್ನು ವಿಶೇಷ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಆಯ್ಕೆ ಪ್ರಕ್ರಿಯೆಯು ಜಾರಿಯಲ್ಲಿದೆ.

8. ಕರ್ನಾಟಕ ಲೋಕಸೇವಾ ಆಯೋಗದಿಂದ ಪ್ರಸ್ತುತ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆಯ್ಕೆ

ಪಟ್ಟಿಯನ್ನು ಕಳುಹಿಸಿದ್ದು, ನೇಮಕಾತಿ ಆದೇಶ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆ.

9. ಇಲಾಖೆಯಲ್ಲಿ ಒಟ್ಟು 13965 ಗ್ರೂಪ್–ಡಿ ನೌಕರರ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 4067 ಹುದ್ದೆಗಳು ಖಾಲಿಯಿವೆ. ಸದರಿ ಖಾಲಿ ಹುದ್ದೆಗಳ ಪೈಕಿ 2323 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಇತ್ತೀಚೆಗೆ ಮಂಜೂರಾತಿ ನೀಡಿದೆ.

ಸರ್ಕಾರಿ ಆಸ್ಪತ್ರೆ ಮೇಲ್ದರ್ಜೆಗೇರಿಸುವುದು

287 (716) ಶ್ರೀ ಸಂಗಮೇಶ್ವರ ಬಿ.ಕೆ. (ಭದ್ರಾವತಿ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭದ್ರಾವತಿ ನಗರದಲ್ಲಿರುವ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯನ್ನು 150 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ;

ಇ) ಇದನ್ನು ಯಾವಾಗ ಮೇಲ್ದರ್ಜೆಗೇರಿಸಲಾಗುವುದು ?

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

ಅ), ಆ) ಮತ್ತು ಇ) ಭದ್ರಾವತಿ ಸಾರ್ವಜನಿಕ ಆಸ್ಪತ್ರೆಯನ್ನು 100 ಹಾಸಿಗೆಗಳಿಂದ 150 ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸ್ವೀಕೃತವಾಗಿದೆ. ಸದರಿ ಆಸ್ಪತ್ರೆಯು 100 ಹಾಸಿಗೆಗಳ ಸಾಮರ್ಥ್ಯ ಹೊಂದಿದ್ದು, ಕಳೆದ 3 ವರ್ಷಗಳಲ್ಲಿ ಇದರ ಹಾಸಿಗೆ ಬಳಕೆ ಪ್ರಮಾಣವು ಕ್ರಮವಾಗಿ ಶೇಕಡ 30.34, ಶೇಕಡ 33.87 ಮತ್ತು ಶೇಕಡ 48.52ರಷ್ಟಿದೆ.

ರಾಜ್ಯದಲ್ಲಿ ಹೊಸ ಆಸ್ಪತ್ರೆಗಳ ಪ್ರಾರಂಭಿಸುವಿಕೆ ಮತ್ತು ಮೇಲ್ದರ್ಜೆಗೇರಿಸುವಿಕೆ ಬದಲಾಗಿ ಅಸ್ತಿತ್ವದಲ್ಲಿರುವ ಆಸ್ಪತ್ರೆಗಳಿಗೆ ಮೂಲ ಸೌಕರ್ಯಗಳಾದ ಕಟ್ಟಡ, ಉಪಕರಣಗಳು, ವೈದ್ಯರು ಮತ್ತು ಸಿಬ್ಬಂದಿ ಒದಗಿಸಿ ಅವುಗಳ ಬಲವರ್ಧನೆಗೆ ಹೆಚ್ಚು ಗಮನಹರಿಸಬೇಕಾಗಿದೆ. ಆದುದರಿಂದ, ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಯ ಮೇಲ್ದರ್ಜೆಗೇರಿಸುವಿಕೆಯನ್ನು ದಿನಾಂಕ : 11–01–2011 ರಿಂದ ಮೂರು ವರ್ಷಗಳ ಅವಧಿಗೆ ಒಂದು ನೀತಿ ನಿರ್ಣಯವಾಗಿ ಸರ್ಕಾರವು ತಡೆಹಿಡಿದಿದೆ.